## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 803
ಸದಸ್ಯರ ಹೆಸರು : ಶ್ರೀ.ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 13.12.2018
ಉತ್ತರಿಸುವ ಸಚಿವರು : ಪಶು ಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
| --- | --- | --- |
| ಅ) | ಬಾಗಲಕೋಟೆ ಜಿಲ್ಲೆಯ ಬೀಳಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಬದಾಮಿ ತಾಲ್ಲೂಕಿನ ಹಳ್ಳಿಗಳಲ್ಲಿ "ಗೋಶಾಲೆ" ಯನ್ನು ನಿರ್ಮಿಸುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಗಲಕೋಟ ಜಿಲ್ಲೆಯ ಬೀಳಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಬದಾಮಿ ತಾಲ್ಲೂಕಿನ ಹಳ್ಳಿಗಳಲ್ಲಿ "ಗೋಶಾಲೆ" ನಿರ್ಮಿಸುವ ಯಾವುದೇ ಬೇಡಿಕೆ ಇರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಸದರಿ ಗೋಶಾಲೆಯನ್ನು ಬೀಳಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಬದಾಮಿ ತಾಲ್ಲೂಕಿನ ಯಾವ ಗ್ರಾಮದಲ್ಲಿ ನಿರ್ಮಿಸಲಾಗುತ್ತಿದೆ; | ಅನ್ವಯಿಸುವುದಿಲ್ಲ. |
| ಇ) | ಇಲ್ಲವಾದಲ್ಲಿ, ಸದರಿ ಮತಕ್ಷೇತ್ರದ ವ್ಯಾಪ್ತಿಯ ಹಳ್ಳಿಗಳಲ್ಲಿ ಗೋಶಾಲೆಯನ್ನು ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ; ಹಾಗೂ ಯಾವ ಕಾಲಮಿತಿಯಲ್ಲಿ ಗೋಶಾಲೆಯನ್ನು ಪೂರ್ಣಗೊಳಿಸುವುದು? | ಬೀಳಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಬದಾಮಿ ತಾಲ್ಲೂಕಿನಲ್ಲಿ ಮೇವಿನ ಕೊರತೆ ನೀಗಿಸಲು ಕ್ರಿಯಾಯೋಜನೆ ರೂಪಿಸಿದ್ದು, ತಾಲ್ಲೂಕು ಟಾಸ್ಕ್ ಫೋರ್ಸ ಅಧ್ಯಕ್ಷತೆಯ ಮೇರೆಗೆ ರೈತರ ಬೇಡಿಕೆ ಮತ್ತು ಪರಿಸ್ಥಿತಿಯನ್ನು ಅವಲೋಕಿಸಿ ಮೇವು ಬ್ಯಾಂಕ್/ಗೋಶಾಲೆ ತೆರೆಯಲು ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ. ಅಗತ್ಯತೆ ಆಧಾರಿಸಿ ಗೋಶಾಲೆಗಳನ್ನು ತೆರೆಯಲು ಕ್ರಮ ಜರುಗಿಸಲಾಗುವುದು. |

ಸಂ: ಪಸಂಮೀ 175 ಸಲೆವಿ 2018

(ವೆಂಕಟರಾವ್ ನಾಡಗೌಡ)
**ಪಶುಸಂಗೋಪನೆ ಹಾಗೂ ಮೀನುಗಾರಿಕೆ ಸಚಿವರು**